# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 136 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರತಾಪ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಸಾವಿರಾರು ಮಂದಿ ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿ ಹಲವಾರು ತಿಂಗಳುಗಳೇ ಕಳೆದಿದ್ದರೂ ಹೊಸ ಪಡಿತರ ಚೀಟಿ ಇದುವರೆವಿಗೂ ಅವರಿಗೆ ಲಭ್ಯವಾಗದೇ ಇರುವುದರಿಂದ ಅರ್ಜಿದಾರರಿಗೆ ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ | ಬಂದಿದ್ದಲ್ಲಿ ಹೊಸ ಪಡಿತರ ಚೀಟಿ ಇದುವರೆಗೂ ಅವರಿಗೆ ಲಭ್ಯವಾಗದೇ ಇರಲು ಕಾರಣಗಳೇನು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸ್ವಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು |

| | | |
|---|---|---|
| | | ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳನ್ವಯ ರಾಜ್ಯದ ಎಲ್ಲಾ ಅರ್ಹ ಫಲಾನುಭವಿಗಳಿಗೆ ಆದ್ಯತಾ ಪಡಿತರ (PHH) ಚೀಟಿಗಳನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಲಾಗಿರುತ್ತದೆ.<br>ಸದರಿ ಮಾನದಂಡಗಳನ್ವಯ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಲಾಗಿರುತ್ತದೆ. ಇದರಲ್ಲಿ 62,595 ಅರ್ಜಿಗಳನ್ನು ಅನುಮೋದಿಸಿದ್ದು, 4,679 ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ ಬಾಕಿ ಇರುವ 2,28,712 ಅರ್ಜಿಗಳ ಕುರಿತು ಸ್ಥಳ ಪರಿಶೀಲನೆ ಮಾಡಿ ತ್ವರಿತವಾಗಿ ವಿಲೇವಾರಿ ಮಾಡಲು ರಾಜ್ಯದ ಜಂಟಿ/ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| ೩ | ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿ ಹಲವಾರು ತಿಂಗಳುಗಳೇ ಕಳೆದಿದ್ದರೂ ಹೊಸ ಪಡಿತರ ಚೀಟಿ ಲಭ್ಯವಾಗದಿರುವವರ ಸಂಖ್ಯೆ ಎಷ್ಟು;(ಜಿಲ್ಲಾವಾರು ವಿವರ ನೀಡುವುದು) | ಹೊಸ ಆದ್ಯತಾ ಪಡಿತರ ಚೀಟಿ ಕೋರಿ ದಿನಾಂಕ: 03.07.2024 ರ ವರೆಗೆ 3,22,483 ಅರ್ಜಿಗಳು ಸ್ವೀಕೃತವಾಗಿರುತ್ತವೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ -01 ರಲ್ಲಿ ಒದಗಿಸಲಾಗಿದೆ. |

| | | |
|---|---|---|
| ಈ | ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿ ಹಲವಾರು ತಿಂಗಳುಗಳಿಂದ ಕಾಯುತ್ತಿರುವ ಸದರಿ ಅರ್ಜಿದಾರರಿಗೆ ಯಾವ ಕಾಲಮಿತಿಯೊಳಗೆ ಹೊಸ ಪಡಿತರ ಚೀಟಿ ವಿತರಿಸಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಲಾಗಿರುತ್ತದೆ. ಇದರಲ್ಲಿ ಸುಮಾರು 62,595 ಅರ್ಜಿಗಳನ್ನು ಅನುಮೋದನೆ ನೀಡಲಾಗಿದ್ದು, ಬಾಕಿ ಇರುವ ಅರ್ಜಿಗಳ ಕುರಿತು ಸ್ಥಳ ಪರಿಶೀಲನೆ ಮಾಡಿ ತ್ವರಿತವಾಗಿ ವಿಲೇವಾರಿ ಮಾಡಲು ರಾಜ್ಯದ ಜಂಟಿ/ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. |

ಆನಾಸ 188 ಡಿಆರ್ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು

LCQ - 136

# ಅನುಬಂಧ-01

## ಶ್ರೀ. ಪ್ರತಾಪ ಸಿಂಹ ನಾಯಕ ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 136

| ಕ್ರ. ಸಂ. | ಜಿಲ್ಲೆ | ದಿನಾಂಕ: 03.07.2024 ರನ್ವಯ ಆದ್ಯತಾ ಪ. ಚೀ ಕೋರಿ ಬಾಕಿ ಇರುವ ಅರ್ಜಿಗಳ ವಿವರ |
|---|---|---|
| 1 | BAGALKOTE | 13,335 |
| 2 | BALLARI | 10,501 |
| 3 | BANGALORE EAST | 6,082 |
| 4 | BANGALORE NORTH | 4,747 |
| 5 | BANGALORE SOUTH | 4,794 |
| 6 | BANGALORE WEST | 11,010 |
| 7 | BELAGAVI | 32,880 |
| 8 | BENGALURU | 16,438 |
| 9 | BENGALURU RURAL | 7,041 |
| 10 | BIDAR | 18,262 |
| 11 | CHAMARAJANAGARA | 3,639 |
| 12 | CHIKKABALLAPURA | 5,356 |
| 13 | CHIKKAMAGALURU | 3,628 |
| 14 | CHITRADURGA | 6,432 |
| 15 | DAKSHINA KANNADA | 4,879 |
| 16 | DAVANAGERE | 4,089 |
| 17 | DHARWAR | 11,575 |
| 18 | GADAG | 9,881 |
| 19 | HASSAN | 5,452 |
| 20 | HAVERI | 11,094 |
| 21 | KALABURAGI | 26,898 |
| 22 | KODAGU | 1,583 |
| 23 | KOLAR | 5,006 |
| 24 | KOPPAL | 8,560 |
| 25 | MANDYA | 4,756 |
| 26 | MYSURU | 6,796 |
| 27 | RAICHUR | 15,608 |
| 28 | RAMANAGARA | 3,859 |
| 29 | SHIVAMOGGA | 6,583 |
| 30 | TUMAKURU | 8,379 |
| 31 | UDUPI | 2,381 |
| 32 | UTTARA KANNADA | 4,055 |
| 33 | VIJAYANAGARA | 5,364 |
| 34 | VIJAYAPURA | 24,089 |
| 35 | YADGIR | 7,451 |
| | | |
| **TOTAL** | | **3,22,483** |